## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಓದೋಗಂಗಪ್ಪ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರ ಮತ್ತು ಶ್ರೀ ಚಂದ್ರಮೌಳಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್/ ಉಪಲೋಕ್ / ಬಿಡಿ-48/2006/2011/ಡಿಆರ್‌ಇ-1, ದಿನಾಂಕ: 29-03-2012.

-----

**ಪ್ರಸ್ತಾವನೆ**

ಶ್ರೀ ಓದೋಗಂಗಪ್ಪ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರ ಮತ್ತು ಶ್ರೀ ಚಂದ್ರಮೌಳಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರುಗಳು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ 3ನೇ ಹಂತದಡಿ ಅನುಮೋದಿಸಲ್ಪಟ್ಟ ಕಾಮಗಾರಿಗಳ ಡಿ.ಪಿ.ಆರ್. ಗಳನ್ನು ಕೌಶಿಕ್ ಕನ್ಸಲ್‌ಟೆಂಟ್ಸ್, ಮೈಸೂರು ಇವರಿಂದ ತಯಾರಿಸದೇ ಇದ್ದರೂ ಅವರಿಗೆ ಬಾಬ್ತು ರೂ. 2.75 ಲಕ್ಷಗಳನ್ನು ಹಣ ದುರುಪಯೋಗ ಮತ್ತು ಅಧಿಕಾರ ದುರುಪಯೋಗಪಡಿಸಿ ಕೊಂಡಿದ್ದಾರೆಂದು ಶ್ರೀ ರಾಜಶೇಖರ, ಬೆಂಗಳೂರು ಎಂಬುವವರು ಸಲ್ಲಿಸಿರುವ ಲಿಖಿತ ದೂರಿನ ಮೇರೆಗೆ ಜರುಗಿಸಿದ ತನಿಖೆಯಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಆದೇಶ ನೀಡುವಂತೆ ಕರ್ನಾಟಕ ಉಪ ಲೋಕಾಯುಕ್ತ-1ರವರು ಮೇಲೆ ಓದಲಾದ ದಿನಾಂಕ. 29-03-2012ರ ಪತ್ರದೊಂದಿಗೆ ಕಳುಹಿಸಿರುವ ವರದಿಯಲ್ಲಿ ಶಿಫಾರಸ್ಸು ಮಾಡಿದ್ದಾರೆ.

ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ ಓದೋಗಂಗಪ್ಪ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರ ಮತ್ತು ಶ್ರೀ ಚಂದ್ರಮೌಳಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ರವರುಗಳು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ 3ನೇ ಹಂತದಡಿ ಅನುಮೋದಿಸಲ್ಪಟ್ಟ ಕಾಮಗಾರಿಗಳ ಡಿ.ಪಿ.ಆರ್. ಗಳನ್ನು ಕೌಶಿಕ್ ಕನ್ಸಲ್‌ಟೆಂಟ್ಸ್, ಮೈಸೂರು ಇವರಿಂದ ತಯಾರಿಸದೇ ಇದ್ದರೂ ಅವರಿಗೆ ಬಾಬ್ತು ರೂ. 2.75 ಲಕ್ಷಗಳನ್ನು ಹಣ ದುರುಪಯೋಗ ಮತ್ತು ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಕರ್ನಾಟಕ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಶ್ರೀ ಓದೋಗಂಗಪ್ಪ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರ ಮತ್ತು ಶ್ರೀ ಚಂದ್ರಮೌಳಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್

----2

ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 14 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ. 15-05-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಓದೋಗಂಗಪ್ಪ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರ ಮತ್ತು ಶ್ರೀ ಚಂದ್ರಮೌಳಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/5/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಭಾರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ:
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಉಪ ಲೋಕಾಯುಕ್ತ ಕಚೇರಿ, ಬೆಂಗಳೂರು.
3. ಉಪ ನಿಬಂಧಕರು ವಿಚಾರಣೆಗಳು-1 ,ಕರ್ನಾಟಕ ಉಪ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಕರ್ನಾಟಕ ಉಪ ಲೋಕಾಯುಕ್ತ- ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
6. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ.
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
10. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
11. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರೆ
12. ಸಂಬಂಧಪಟ್ಟ ಅಧಿಕಾರಿಗಳಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ.
13. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.

# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 379 ಸೇಶಿಕಾ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 15-05-2012

## ಅಧಿಸೂಚನೆ

ಶ್ರೀ ಬಿ.ಮಂಜುನಾಥ್, ಕಾರ್ಯಪಾಲಕ ಇಂಜಿನಿಯರ್, ಇವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಮರುಸ್ಥಳನಿಯುಕ್ತಿಗಾಗಿ ಕಾಯ್ದ ದಿನಾಂಕ: 30-08-2011 ರಿಂದ 01-09-2011 ರವರೆಗಿನ ಅವಧಿಯನ್ನು ಸೇರುವಿಕೆ ಕಾಲವೆಂದು ಪರಿಗಣಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/5/12

(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
5. ಶ್ರೀ ಬಿ. ಮಂಜುನಾಥ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
7. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.